## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ.ಪ್ರತಾಪ ಸಿಂಹ ನಾಯಕ್ ಕೆ. |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 935 (1039) |
| ಉತ್ತರಿಸಬೇಕಾದ ದಿನಾಂಕ | : 23.02.2024 |
| ಉತ್ತರಿಸಬೇಕಾದವರು | : ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಹಾಸ್ಟೆಲ್‌ಗಳಿಗೆ, ದಶಕಗಳ ಹಿಂದಿನ ಖರ್ಚು ವೆಚ್ಚಗಳಿಗೆ ಪೂರಕವಾಗಿ ರೂಪಿಸಿದ ಅನುದಾನದ ಪ್ರಮಾಣದಲ್ಲಿಯೇ ಇಂದಿಗೂ ಸರ್ಕಾರ ಅನುದಾನ ನೀಡುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br><br>ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಪ್ರತಿ ವಿದ್ಯಾರ್ಥಿವಾರು ಲೆಕ್ಕಚಾರ ಮಾಡಿ ಅನುದಾನ ಒದಗಿಸಲಾಗುತ್ತಿದೆ. ನಿರ್ವಹಣೆ ಸಂಬಂಧ ನಿಗಧಿಪಡಿಸಿದ ವೆಚ್ಚಗಳಿಗೆ ಅನುದಾನ ಒದಗಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಸದರಿ ಹಾಸ್ಟೆಲ್‌ಗಳಿಗೆ ನೀಡುತ್ತಿರುವ ಅನುದಾನಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಅನುಸರಿಸುತ್ತಿರುವ ನಿಯಮ. ಮಾನದಂಡಗಳೇನು; | |
| ಇ) | ಅನುದಾನದ ಕೊರತೆಯಿಂದಾಗಿ ಗುಣಮಟ್ಟದ ವಸ್ತುಗಳನ್ನು ಸರಿಯಾಗಿ ಖರೀದಿಸಿ, ವಿದ್ಯಾರ್ಥಿಗಳಿಗೆ ಪೂರೈಸಲು ಸಾಧ್ಯವಾಗದೇ ಇರುವುದರಿಂದ ಪ್ರಸ್ತುತ ನೀಡುತ್ತಿರುವ ಅನುದಾನವನ್ನು ಗಣನೀಯವಾಗಿ ಹೆಚ್ಚಿಸಲು ಸರ್ಕಾರ ಈ ಕೂಡಲೇ ಕ್ರಮ ಕೈಗೊಳ್ಳುವುದೇ; | ಕಾಲಕಾಲಕ್ಕೆ ಆಗ್ಗಿಂದಾಗೆ ಆಹಾರ ಪದಾರ್ಥಗಳ ಸಾಮಾಗ್ರಿಗಳ ದರಗಳು ಇನ್ನಿತರೆ ನಿರ್ವಹಣೆಗೆ ಸಂಬಂಧಿಸಿದ ದರಗಳು ಪರಿಷ್ಕೃತವಾದಂತೆಲ್ಲ ನಿಲಯಾರ್ಥಿಗಳ ಭೋಜನಾ ವೆಚ್ಚದ ದರಗಳನ್ನು ಪರಿಷ್ಕರಿಸಿ ದರವನ್ನು ಹೆಚ್ಚಿಸಿ ಭೋಜನವನ್ನು ಒದಗಿಸಲಾಗುತ್ತಿದೆ.<br>ಮುಂದುವರೆದು, ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಿರ್ವಹಿಸಲಾಗುತ್ತಿರುವ ನಿಲಯಗಳ ನಿರ್ವಹಣೆಗೆ ಸಂಬಂಧಿಸಿದಂತೆ 2014-15ನೇ ಸಾಲಿನ ದರಗಳ ಪರಿಷ್ಕರಣೆಯಂತೆ, ಇದುವರೆವಿಗೂ ನಿರ್ವಹಣೆಯನ್ನು ಮಾಡಲಾಗುತ್ತಿದೆ. ಪ್ರಸ್ತುತ ಕೊವೀಡ್ -19ರ ಕಾರಣದಿಂದ ಮತ್ತು ಇತ್ತೀಚಿನ ಮಾರುಕಟ್ಟೆ ದರಗಳ ಹೆಚ್ಚಾಗಿರುವುದರಿಂದ ಹಾಲಿ ಇರುವ ದರಗಳನ್ನು ಪರಿಷ್ಕರಿಸಿ, ಇತ್ತೀಚಿನ ಮಾರುಕಟ್ಟೆಯ ದರಗಳಿಗೆ ಅನುಗುಣವಾಗಿ ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |
| ಈ) | ಯಾವ ಕಾಲಮಿತಿಯೊಳಗೆ ಸದರಿ ಎಲ್ಲಾ ಹಾಸ್ಟೆಲ್ ಗಳಿಗೆ, ಪ್ರಸ್ತುತ ದಿನಮಾನದ ಖರ್ಚುವೆಚ್ಚಗಳಿಗೆ ಅನುಸಾರವಾಗಿ ಅನುದಾನ ನೀಡುವುದು ಸೇರಿದಂತೆ ಹಾಸ್ಟೆಲ್‌ಗಳ ಸಮಗ್ರ ಅಭಿವೃದ್ಧಿಗೆ ಸಮರ್ಪಕ ಕ್ರಮ ಕೈಗೊಳ್ಳಲಾಗುವುದು? | ಈಗಾಗಲೇ ಪ್ರಸ್ತುತ ಮಾರುಕಟ್ಟೆಯ ದರಗಳನ್ವಯ ದರ ಪರಿಷ್ಕರಣೆ ಕೋರಿ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |

**ಸಕಇ 117 ಪಕವಿ 2024**

**(ಡಾ|| ಹೆಚ್.ಸಿ ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**